All India Radio: Bangalore
Regional Bulletin In Kannada
24.06.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ; ಮಸೂದೆಗಳಿಗೆ ಅಂಗೀಕಾರ ನೀಡುವಂತೆ ಮನವಿ
- ಹೇಮಾವತಿ ಲಿಂಕ್ ಕೆನಾಲ್ ಎಕ್ಸ್‌ಪ್ರೆಸ್ ಕಾಮಗಾರಿಗೆ ವಿರೋಧ ಹಿನ್ನೆಲೆ ; ಇದೇ ೩೦ ರಂದು ರೈತರ ಜೊತೆ ಸರ್ಕಾರ ಚರ್ಚೆ
- ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ - ಅಪಾರ ಪ್ರಮಾಣದ ಅಕ್ರಮ ಆಸ್ತಿ ಪತ್ತೆ
- ರಾಜ್ಯದಲ್ಲಿ ಹೆಚ್ಚುತ್ತಿರುವ ಭ್ರಷ್ಟಾಚಾರ ಪ್ರಕರಣ ; ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು. ಈ ವೇಳೆ ಅವರು, ರಾಷ್ಟ್ರಪತಿಯವರ ಅಂಕಿತಕ್ಕಾಗಿ ಬಾಕಿಯಿರುವ ಮಸೂದೆಗಳಿಗೆ ಅಂಗೀಕಾರ ನೀಡುವಂತೆ ರಾಷ್ಟ್ರಪತಿಯವರಲ್ಲಿ ಮನವಿ ಮಾಡಿದ್ದಾರೆ. ಏಳು ಮಸೂದೆಗಳು ರಾಷ್ಟ್ರಪತಿಯವರ ಅಂಕಿತಕ್ಕಾಗಿ ಬಾಕಿ ಉಳಿದಿವೆ.

ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಬಾಲಿವುಡ್ ನಟ ಅಮೀರ್‌ಖಾನ್ ರಾಷ್ಟ್ರಪತಿ ಭವನದಲ್ಲಿಂದು ಅನಿರೀಕ್ಷಿತವಾಗಿ ಭೇಟಿಯಾಗಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಸಚಿವರಾದ ಕೆ.ಜೆ. ಜಾರ್ಜ್, ಹೆಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು. ಇಂದು ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಲಿದ್ದಾರೆ.

<><><><>

ಹೇಮಾವತಿ ಲಿಂಕ್ ಕೆನಾಲ್ ಎಕ್ಸ್‌ಪ್ರೆಸ್ ಕಾಮಗಾರಿಗೆ ತುಮಕೂರು ಜಿಲ್ಲೆಯಲ್ಲಿ ವಿರೋಧ ವ್ಯಕ್ತವಾಗುತ್ತಿರುವ ಹಿನ್ನಲೆಯಲ್ಲಿ ಇದೇ ೩೦ರಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ರೈತರು ಹಾಗೂ ಶಾಸಕರ ಸಭೆ ಕರೆಯಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗೆ ಸಚಿವ ಸಂಪುಟದಲ್ಲಿ ಅನುಮೋದನೆಯಾಗಿ ಅನುದಾನ ನೀಡಿದ್ದರಿಂದ ಕಾಮಗಾರಿ ಪ್ರಾರಂಭಿಸಲಾಗಿದೆ. ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿಗೆ ಸಾರ್ವಜನಿಕರ ವಿರೋಧ ಹೆಚ್ಚಳವಾಗಿರುವುದರಿಂದ ಉಪಮುಖ್ಯಮಂತ್ರಿಯವರ ನೇತೃತ್ವದಲ್ಲಿ ಸಭೆ ನಡೆಸಲು ನಿರ್ಧರಿಸಲಾಗಿದೆ. ಸಭೆಯಲ್ಲಿ ಜಿಲ್ಲೆಯ ಶಾಸಕರು, ರೈತ ಮುಖಂಡರು ಭಾಗವಹಿಸುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮನವಿ ಮಾಡಿದ್ದಾರೆ.

ಧ್ವನಿ : ಡಾ.ಜಿ.ಪರಮೇಶ್ವರ್, ಗೃಹಸಚಿವ (೧೩ ಸೆಕೆಂಡ್‌ಗಳು)

<><><><>

ರಾಜ್ಯದ ವಿವಿಧೆಡೆ ಇಂದು ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಅಕ್ರಮ ಆಸ್ತಿ ಪತ್ತೆ ಹಚ್ಚಿದ್ದಾರೆ. ಕರ್ನಾಟಕ ನೀರಾವರಿ ನಿಗಮದ ಧಾರವಾಡ ವಿಭಾಗೀಯ ಮುಖ್ಯ ಇಂಜಿನಿಯರ್ ಅಶೋಕ ವಸಂದ್ ಅವರ ಬೆಳಗಾವಿಯ ರಾಮತೀರ್ಥನಗರದಲ್ಲಿರುವ ಮನೆಯ ಮೇಲೆ ಇಂದು ದಾಳಿ ನಡೆದಿದ್ದು, ವಜ್ರಾಭರಣ, ಚಿನ್ನಾಭರಣ ಹಾಗೂ ಬೆಳ್ಳಿಯ ವಸ್ತುಗಳು ಮತ್ತು ಒಂದೂವರೆ ಲಕ್ಷ ರೂಪಾಯಿ ನಗದು ಪತ್ತೆಹಚ್ಚಿದ್ದಾರೆ. ಧಾರವಾಡ ಕಚೇರಿ ಮೇಲೂ ಲೋಕಾಯುಕ್ತ ದಾಳಿ ನಡೆಸಿದ್ದು, ಶೋಧಕಾರ್ಯ ಮುಂದುವರೆದಿದೆ. ಗದಗ ನಗರ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಡಿ.ಬಿ. ಪಾಟೀಲ್ ಮನೆ ಹಾಗೂ ಕಚೇರಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಚಿಕ್ಕಮಗಳೂರು ನಗರಸಭೆ ಲೆಕ್ಕಾಧಿಕಾರಿ ಲತಾಮಣಿ ನಿವಾಸ ಹಾಗೂ ಕಚೇರಿಗಳ ಮೇಲೂ ಲೋಕಾಯುಕ್ತ ಪೊಲೀಸರು ದಾಳಿ ಮಾಡಿದ್ದು, ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಶಿವಮೊಗ್ಗ ಜಿಲ್ಲೆಯ ಮೂರು ಕಡೆ ದಾಳಿಯಾಗಿದ್ದು, ಸಾವಯುವ ಕೃಷಿ ಸಂಶೋಧನಾ ನಿರ್ದೇಶಕ ಡಾ. ಎಸ್.ಪ್ರದೀಪ್ ಅವರ ಪ್ರಿಯಾಂಕಾ ಲೇಔಟ್‌ನಲ್ಲಿರುವ ಮನೆ, ಶಿಕಾರಿಪುರ ತಾಲೂಕಿನ ಭದ್ರಾಪುರದಲ್ಲಿರುವ ಫಾರ್ಮ್ ಹೌಸ್, ಹೊಸನಗರದಲ್ಲಿ ದಾಳಿ ನಡೆದಿದೆ.

ಲೋಕಾಯುಕ್ತ ಎಸ್ಪಿ ಎಂ.ಹೆಚ್.ಮಂಜುನಾಥ್ ಚೌಧರಿ ನೇತೃತ್ವದಲ್ಲಿ ದಾಳಿಯಾಗಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

<><><>

ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕವಾಗಿ ಸುರಿಯುತ್ತಿರುವ ಮಳೆಯಿಂದ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೆ.ಆರ್.ಎಸ್. ಅಣೆಕಟ್ಟೆ ಭಾಗಶ: ಭರ್ತಿಯಾಗಿದೆ. ಒಳ ಹರಿವು ಇನ್ನಷ್ಟು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಡ್ಯಾಂನಿಂದ ನದಿಗೆ ನೀರು ಬಿಡಲಾಗಿದೆ. ಅಣೆಕಟ್ಟೆಯಿಂದ ೨ ಗೇಟುಗಳ ಮೂಲಕ ೫ ಸಾವಿರದಿಂದ ೧೫ ಸಾವಿರ ಕ್ಯೂಸೆಕ್ ನೀರನ್ನು ನದಿ ಹರಿಸಲಾಗಿದೆ. ಪ್ರಸ್ತುತ ಅಣೆಕಟ್ಟೆಯಿಂದ ನದಿಗೆ ಮತ್ತು ನಾಲೆಗಳಿಗೆ ಸೇರಿ ಹೊರಹರಿವು ಆರು ಸಾವಿರ ಕ್ಯೂಸೆಕ್ ಇದ್ದು, ೪೩.೨೯೮ ಟಿ.ಎಂ.ಸಿ ನೀರಿನ ಸಂಗ್ರಹವಿದೆ.

<><><>

ಹಾಸನ ಜಿಲ್ಲೆಯಾದ್ಯಂತ ಇಂದು ಮಳೆ ಹೆಚ್ಚಾಗಿದ್ದು ಸಕಲೇಶಪುರ ತಾಲೂಕಿನಾದ್ಯಂತ ನಿರೀಕ್ಷೆಗೂ ಮೀರಿ ಮಳೆಯಾಗುತ್ತಿದೆ. ನಿರಂತರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಸಕಲೇಶಪುರ ತಾಲೂಕಿನ ಶಾಲೆ ಹಾಗೂ ಅಂಗನವಾಡಿಗಳಿಗೆ ಇಂದು ರಜೆ ಘೋಷಿಸಿ ಜಿಲ್ಲಾಧಿಕಾರಿ ಲತಾ ಕುಮಾರಿ ಅದೇಶಿಸಿದ್ದಾರೆ. ಭಾರಿ ಮಳೆಯಿಂದ ಅಂಗನವಾಡಿ ಹಾಗೂ ಶಾಲೆಯ ಮಕ್ಕಳಿಗೆ ಯಾವುದೇ ತೊಂದರೆ ಆಗಬಾರದು ಎಂಬ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.

<><><>

ರಾಜ್ಯದಲ್ಲಿ ಭ್ರಷ್ಟಾಚಾರ ಪ್ರಕರಣಗಳು ಹೆಚ್ಚುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಹದಗೆಟ್ಟಿದ್ದು, ಅಕ್ರಮ ವರ್ಗಾವಣೆ ಅವ್ಯಾಹತವಾಗಿ ನಡೆಯುತ್ತಿದೆ ಎಂದು ದೂರಿದ್ದಾರೆ. ಕಾಂಗ್ರೆಸ್ ಮತ್ತು ಭ್ರಷ್ಟಾಚಾರ ಒಂದು ನಾಣ್ಯದ ಎರಡು ಮುಖಗಳು ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂಗೈ ಹುಣ್ಣಿಗೆ ಕನ್ನಡಿ ಹಿಡಿಯುವ ಅವಶ್ಯಕತೆ ಹೇಗೆ ಇಲ್ಲವೋ ಹಾಗೆ ಕಾಂಗ್ರೆಸ್ ಭ್ರಷ್ಟಾಚಾರ ಕಣ್ಣಿಗೆ ಕಾಣುತ್ತದೆ ಎಂದು ವ್ಯಂಗ್ಯವಾಡಿದ್ದಾರೆ. ವಸತಿ ಇಲಾಖೆಯಲ್ಲಿನ ಭ್ರಷ್ಟಾಚಾರ ಕುರಿತಂತೆ ಸಚಿವ ಜಮೀರ್ ಅಹಮದ್ ರಾಜೀನಾಮೆ ಜೊತೆಗೆ ನ್ಯಾಯಾಂಗ ಸಮಿತಿ ನೇಮಿಸಿ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

<><><><>

ಹಲ್ಲೆ ಪ್ರಕರಣದಲ್ಲಿ ಬಿಜೆಪಿ ಹಿರಿಯ ನಾಯಕ, ಮಾಜಿ ಸಚಿವ ಅನಂತಕುಮಾರ್ ಹೆಗ್ಡೆ ವಿರುದ್ಧ ದಾಬಸ್‌ಪೇಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ನೆಲಮಂಗಲದ ಉದ್ಯಮಿ ಸೈಫ್‌ಖಾನ್ ಎಂಬುವವರ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಅನಂತಕುಮಾರ್ ಹೆಗ್ಡೆ ಹಲ್ಲೆ ಆರೋಪವನ್ನು ಅಲ್ಲಗೆಳೆದಿದ್ದಾರೆ. ಎಫ್‌ಐಆರ್‌ನಲ್ಲಿ ಮೊದಲ ಆರೋಪಿಯಾಗಿ ಅನಂತಕುಮಾರ್ ಹೆಗ್ಡೆ ಅವರನ್ನು ಹಾಗೂ ೨ನೇ ಆರೋಪಿಯಾಗಿ ಅವರ ಗನ್‌ಮ್ಯಾನ್ ಹಾಗೂ ವಾಹನ ಚಾಲಕನನ್ನು ೩ನೇ ಆರೋಪಿಯನ್ನಾಗಿ ಹೆಸರಿಸಲಾಗಿದೆ.

<><><><>

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಇಂದು ಆಕಾಶವಾಣಿ ಬೆಂಗಳೂರು ಕೇಂದ್ರದ ಆವರಣದಲ್ಲಿ ಯೋಗ ತರಬೇತುದಾರ ನಿತಿನ್ ಕೋರಳ್ಳಿ ನೇತೃತ್ವದಲ್ಲಿ ಯೋಗ ಶಿಬಿರವನ್ನು ಆಯೋಜನೆ ಮಾಡಲಾಗಿತ್ತು.  ಒಂದು ತಾಸಿನ ಕಾರ್ಯಕ್ರಮದಲ್ಲಿ ವಿವಿಧ ಯೋಗಾಸನಗಳನ್ನು ಅಧಿಕಾರಿಗಳು ಮತ್ತು ಸಿಬ್ಬಂದಿ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಆಕಾಶವಾಣಿ ಬೆಂಗಳೂರಿನ ಉಪ ಪ್ರಧಾನ ನಿರ್ದೇಶಕರಾದ ಕೆ.ಪಿ. ಸಂಜೀವ್ ಹಾಗೂ ನಿರ್ದೇಶಕರಾದ ವೆಂಕಟೇಶ್ ಆರ್. ಸೇರಿದಂತೆ ನಿಲಯದ ಸಿಬ್ಬಂದಿ ಪಾಲ್ಗೊಂಡಿದ್ದರು.

ಧ್ವನಿ : ನಿತಿನ್ ಕೋರಳ್ಳಿ

<><><><>

ಮಕ್ಕಳಲ್ಲಿ ಅತಿಸಾರ ಭೇದಿ ತಡೆಗಟ್ಟುವಲ್ಲಿ ಸ್ವಚ್ಛತೆ ಮುಖ್ಯ ಪಾತ್ರವಹಿಸುತ್ತದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಸ್ಪತ್ರೆಯಲ್ಲಿಂದು ಹಮ್ಮಿಕೊಂಡಿದ್ದ ಅತಿಸಾರ ಭೇದಿ ನಿಯಂತ್ರಣ ಕುರಿತು ಹಮ್ಮಿಕೊಂಡಿದ್ದ ಜಾಗೃತಿ ಅಭಿಯಾನ ಉದ್ಘಾಟಿಸಿ ಮಾತನಾಡಿದ ಅವರು,  ಅತಿಸಾರ ತಡೆಯುವಲ್ಲಿ ಪ್ರತಿಯೊಬ್ಬರಲ್ಲಿಯೂ ಅರಿವು ಅಗತ್ಯ. ಊಟಕ್ಕಿಂತ ಮೊದಲು ಕಡ್ಡಾಯವಾಗಿ ಸಾಬೂನಿನಿಂದ ಕೈತೊಳೆದು ಊಟ ಮಾಡಬೇಕು. ಶುಚಿತ್ವ ಇದ್ದರೆ  ಹಣ ಉಳಿತಾಯ ಮಾಡಿದಂತೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಗದಗ ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಸಾಕಷ್ಟು ಮಳೆಯಾಗಿ ಭೂಮಿಯಲ್ಲಿ ತೇವಾಂಶ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಹೊಲಗಳಲ್ಲಿ ಬಿತ್ತಿದ  ಗೋವಿನಜೋಳ, ಸೂರ್ಯಕಾಂತಿ, ತೊಗರಿ, ಶೇಂಗಾ, ಹತ್ತಿ

ಹಾಗೂ ಇತರೆ ಬೆಳೆಗಳಿಗೆ ರೈತರು ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಒಂದು ಎಕರೆ ಬೆಳೆಗೆ ಸುಮಾರು ೫೦೦ ಮೀಲಿ ಲೀಟರ್ ನ್ಯಾನೋ ಯೂರಿಯಾ ಬಳಸಬೇಕೆಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ. ಹೆಚ್. ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ. ಬೆಳೆಗಳಿಗೆ ಹರಳು ರೂಪದ ಯೂರಿಯಾ ಬಳಸುವುದರಿಂದ ಬೇಕಾದ ಪೋಷಕಾಂಶಗಳು ಕೇವಲ ಶೇಕಡ ೫೦ ರಷ್ಟು ಮಾತ್ರ ದೊರೆಯುವ ಸಾಧ್ಯತೆಯಿದೆ. ಚಿಕ್ಕ ಗಾತ್ರದ ಕಣಗಳನ್ನು ಹೊಂದಿರುವ ನ್ಯಾನೋ ಯೂರಿಯಾ ಬಳಸುವುದರಿಂದ ಬೆಳೆಗಳಿಂದ ಶೇಕಡ ೮೦ ರಷ್ಟು ಪೋಷಕಾಂಶಗಳು ದೊರೆಯಲಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಏಪ್ರಿಲ್ ೦೧ ರಿಂದ ಜೂನ್ ೨೨ ರವರೆಗೆ ೬ ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, ಸೂಕ್ತ ತನಿಖೆ ನಡೆಸಿ ನೊಂದವರಿಗೆ ನ್ಯಾಯ ಒದಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ.
2. ಸಾರ್ವಜನಿಕ ದೂರಿನ ಹಿನ್ನಲೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳಿರುವ ಪಿಓಪಿ ಪತ್ತೆ ಕಾರ್ಯಪಡೆಯಿಂದ ಧಾರವಾಡದ ಗರಗ ಗ್ರಾಮದಲ್ಲಿ ಅಪಾರ ಪ್ರಮಾಣದ ಪಿಓಪಿ ಗಣಪತಿ ವಿಗ್ರಹಗಳನ್ನು ವಶಕ್ಕೆ ಪಡೆಯಲಾಗಿದೆ. ನಿಷೇಧಿತ ಪಿಓಪಿ ಗಣೇಶ ವಿಗ್ರಹಗಳ ದಾಸ್ತಾನು ಹೊಂದಿದ್ದ ಮಾಲೀಕನ ವಿರುದ್ಧ ಕ್ರಿಮಿನಲ್ ಮೊಕದಮ್ಮೆ ದಾಖಲಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ
3. ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಜ್ಯದಲ್ಲಿ ಹೊಸದಾಗಿ ೬ ಸಾವಿರದ ೫೯೯ ಗ್ರಾಮ ಗ್ರಂಥಾಲಯಕ್ಕೆ ಸಿದ್ಧತೆ ಮಾಡಿಕೊಂಡಿದ್ದು, ಅದರಂತೆ ಮಂಡ್ಯ ಜಿಲ್ಲೆಯಲ್ಲಿ ೨೭೫ ಗ್ರಂಥಾಲಯಗಳು ಆರಂಭವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>